ಸಂಪುಟ : 8 ಸಂಚಿಕೆ : 255 ಪುಟ : 4 ಬೆಲೆ : 3.00 ಶನಿವಾರ ನವ್ವಂಬರ್ 18, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 255 Pages : 4 Price : 3.00 Saturday November 18, 2023 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ನವೆಂಬರ್ 18 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ:** ವಾರ್ಡ್ ನಂ. 21, 22, 23ರಲ್ಲಿ ಸುಡಗಾಡಗಟ್ಟಿ ಲೈನ್, ಅಕ್ಕಿ ಪ್ಲಾಟ್, ಮುನವಳ್ಳಿ ಪ್ಲಾಟ್, ಕಮತರ ಪ್ಲಾಟ್, ಖಾರದ ಭಟ್ಟಿ ಲೈನ್, ಹೊಂಬಳದವರ ಲೈನ್, ಶರಣಪ್ಪನ ಲೈನ್, ನಾಗಪ್ಪನ ಕಟ್ಟಿ ಲೈನ್, ಪಾಟೀಲರ ಲೈನ್, ರಾಚೋಟೇಶ್ವರ ಲೈನ್ ಮುಂದಿನ ಭಾಗ, ವಾರ್ಡ್ ನಂ. 10, 06ರಲ್ಲಿ ಮುಳಗುಂದವರ ಲೈನ್, ಮಲ್ಲಿಕಾರ್ಜುನಗುಡಿ ಲೈನ್, ಕಲ್ಮನಿಯವರ ಲೈನ್, ಮಾನೆದರ ಲೈನ್, ಗಣಾಚಾರಿ ಲೈನ್, ಬಾಗೋಡಿಯವರ ಲೈನ್, ದೇವದಾ ಲೈನ್, ಕಬಾಡಿ ಲೈನ್, ಅಣ್ಣಿಗೇರಿ ಅವರ ಲೈನ್, ದಿಬ್ಬದ ಲೈನ್, ಕುಲಕರ್ಣಿಗಲ್ಲಿ, ಅಂಬೇಡ್ಕರ ಲೈನ್, ಭಜಂತ್ರಿ ಓಣಿ, ಒಕ್ಕಲಗೇರಿ ಲೈನ್, ಕಿಲ್ಲಾ ಓಣಿ, ನದಾಫ್ ಗಲ್ಲಿ, ಗಾರ್ಗಿಪೇಟೆ, ಯಾತಾಳಿ ಚನ್ನಬಸಪ್ಪನ ಗುಡಿ ಮೇಳದಮನಿ ಲೈನ್, ವಾರ್ಡ್ ನಂ. 35ರಲ್ಲಿ ನೀಲಮ್ಮತಾಯಿಮಠ, 9 ನಂಬರ್ ಸ್ಕೂಲ್, ಪತ್ತಾರ ಸರ್ ಲೈನ್, ಕುರ್ತಕೋಟಿ ಲೇಔಟ್, ರಾಧಾಕೃಷ್ಣನಗರದ ಕೆಲವು ಉಳಿದ ಭಾಗಗಳು, ವಾರ್ಡ್ ನಂ. 29ರಲ್ಲಿ ಸಾಯಿನಗರ, ಪತಂಜಲಿ ರಿಂಗ್ ರೋಡ್ ಬಲಭಾಗ, ಕಲಾಮಂದಿರ ರೋಡ್, ವಾರ್ಡ್ ನಂ. 22ರಲ್ಲಿ ಗಂಗಿಮಡಿ, ಲಿಡ್ಕರ್ ಬಡಾವಣೆ, ಅಪಾರ್ಟಮೆಂಟ್, ಯಲ್ಲಮ್ಮನಗುಡಿ, ಕನ್ನಡ ಶಾಲೆ, ಶುದ್ಧ ನೀರಿನ ಘಟಕ ಲೈನ್.

ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಕ್ಕಳ ದಿನಾಚರಣೆ ಅಂಗವಾಗಿ ನಾಳೆ ಜಿಲ್ಲಾ ಮಟ್ಟದಲ್ಲಿ ವಿವಿಧ ಸ್ಪರ್ಧೆಗಳು

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ಜಿಲ್ಲಾ ಮಟ್ಟದಲ್ಲಿ ಮಕ್ಕಳ ದಿನಾಚರಣೆ ಅಂಗವಾಗಿ ಸೃಜನಾತ್ಮಕ ಪ್ರದರ್ಶನ ಕಲೆಗಳಾದ, ಶಾಸ್ತ್ರೀಯ ನೃತ್ಯ, ಜಾನಪದ ನೃತ್ಯ, ಕರ್ನಾಟಕ ಶಾಸ್ತ್ರೀಯ ಸಂಗೀತ, ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ಸುಗಮ ಸಂಗೀತ. ವಾದ್ಯ ನುಡಿಸುವ ಸ್ಪರ್ಧೆ, ತಬಲಾ, ಮೃದಂಗ, ಕೀಬೋರ್ಡ್, ಕೊಳಲು, ಡೊಳ್ಳು, ನಗಾರಿ, ವಿಜ್ಞಾನದಲ್ಲಿ ಸೃಜನಾತ್ಮಕ ನೂತನ ಆವಿಷ್ಕಾರ, ಚಿತ್ರಕಲಾ ಸ್ಪರ್ಧೆ , ಅಂಗವಿಕಲ / ಬುಡಕಟ್ಟು ಪ್ರದೇಶದ ಮಕ್ಕಳಿಗಾಗಿ ಯಾವುದಾದರು ಸ್ಪರ್ಧೆ ವಯೋಮಿತಿ 09 ರಿಂದ 16 ವರ್ಷದ ಮಕ್ಕಳು ಸ್ಪರ್ಧೆಗಳಲ್ಲಿ ಭಾಗವಹಿಸಲು ಅವಕಾಶವಿರುತ್ತದೆ.

ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಬಂದ ಮಕ್ಕಳನ್ನು ರಾಜ್ಯ ಮಟ್ಟಕ್ಕೆ ಆಯ್ಕೆ ಮಾಡಲಾಗುವುದು. ಹಾಗೂ ಭಾಗವಹಿಸಿದ ಎಲ್ಲ ಮಕ್ಕಳಿಗೂ ಪ್ರಶಂಸಾ ಪತ್ರ ನೀಡಲಾಗುವುದು. ನವೆಂಬರ್ 19 ರಂದು ಬೆಳಿಗ್ಗೆ 10 ಗಂಟೆಗೆ ನಗರಸಭೆ (ಮುನ್ಸಿಪಲ್ ಕಾಲೇಜ್) ಪದವಿ ಪೂರ್ವ ಮಹಾವಿದ್ಯಾಲಯ, ಗಾಂಧಿ ಸರ್ಕಲ್ ಹತ್ತಿರ ಗದಗ ಇಲ್ಲಿ ಸ್ಪರ್ಧೆ ಏರ್ಪಡಿಸಲಾಗಿದೆ. ಮಕ್ಕಳು ನೇರವಾಗಿಯೂ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಹೆಚ್ಚಿನ ಮಾಹಿತಿಗಾಗಿ ರವಿ ಉಮಚಗಿ (ಕಾರ್ಯಕ್ರಮ ಸಂಯೋಜಕರು ಜಿಲ್ಲಾ ಬಾಲಭವನ ಗದಗ) 9916152347, 8904342103 ಇವರನ್ನು ಸಂಪರ್ಕಿಸಬಹುದಾಗಿದೆ.

## ಮಹಿಳಾ ಕುಶಲಕರ್ಮಿಗಳಿಗೆ ಕೈಗಾರಿಕಾ ಅಧ್ಯಯನ ಪ್ರವಾಸ

■ ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ಜಿಲ್ಲಾ ವಲಯ ಯೋಜನೆಯಾದ ವಿಚಾರಗೋಷ್ಠಿ , ಕ್ಷೇತ್ರೋತ್ಸವ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮದಡಿ ಗದಗ ಜಿಲ್ಲೆಯ ಗ್ರಾಮೀಣ ಪ್ರದೇಶದ 18 ರಿಂದ 40 ವಯಸ್ಸಿನ 48 ಜನ ಮಹಿಳಾ ಕುಶಲಕರ್ಮಿಗಳಿಗೆ ಒಟ್ಟು 5 ದಿನಗಳ ಕಾಲ ( ಊಟ, ವಸತಿ ಹಾಗೂ ಪ್ರಯಾಣದ ವೆಚ್ಚ ) ಉಚಿತವಾಗಿ ಕೈಗಾರಿಕಾ ಅಧ್ಯಯನ ಪ್ರವಾಸವನ್ನು ಹಮ್ಮಿಕೊಳ್ಳಲಾಗಿದೆ. ಕೈಗಾರಿಕಾ ಅಧ್ಯಯನ ಪ್ರವಾಸಕ್ಕೆ ಆಸಕ್ತ ಮಹಿಳಾ ಕುಶಲಕರ್ಮಿಗಳು ನವೆಂಬರ್ 18 ರಿಂದ 24 ರೊಳಗೆ ಕಚೇರಿಯಲ್ಲಿ ಅರ್ಜಿ ಪಡೆದು ನವೆಂಬರ್ 27 ರೊಳಗೆ ಭರ್ತಿ ಮಾಡಿದ ಅರ್ಜಿ ಹಾಗೂ ಅಗತ್ಯ ದಾಖಲಾತಿಗಳನ್ನು ಉಪನಿರ್ದೇಶಕರ ಕಚೇರಿ, ಗ್ರಾಮೀಣ ಮತ್ತು ಸಣ್ಣ ಉದ್ಯಮ ವಿಭಾಗ, ಜಿಲ್ಲಾ ಪಂಚಾಯತ್, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ 109, ಹುಬ್ಬಳ್ಳಿ ರೋಡ, ಗದಗ ಈ ಕಚೇರಿಗೆ ಸಲ್ಲಿಸಬಹುದಾಗಿದೆ.

**ಅಗತ್ಯ ದಾಖಲಾತಿಗಳು:** ಗ್ರಾಮ ಪಂಚಾಯತದಿಂದ ಕುಶಲಕರ್ಮಿ ಇರುವ ಬಗ್ಗೆ ದೃಢೀಕರಣ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಇತ್ತೀಚಿನ 2 ಭಾವಚಿತ್ರ, ಜಾತಿ ಪ್ರಮಾಣ ಪತ್ರ ( ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ಇದ್ದಲ್ಲಿ).

## ವಿದ್ಯುತ್ ಅದಾಲತ್ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಶಹರ/ಗ್ರಾಮೀಣ ಪ್ರದೇಶಗಳಲ್ಲಿನ ವಿದ್ಯುತ್ ಸಮಸ್ಯೆಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳಿನ 3ನೇ ಶನಿವಾರ ಸಹಾಯಕ ಕಾರ್ಯಪಾಲಕ ಅಭಿಯಂತರರು, ಗದಗ ಶಹರ/ ಗದಗ ಗ್ರಾಮೀಣ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ಕಾರ್ಯ ಮತ್ತು ಪಾಲನೆ ಉಪವಿಭಾಗಗಳಲ್ಲಿ ವಿದ್ಯುತ್ ಅದಾಲತ್ ನಡೆಸುವ ಮೂಲಕ ಸ್ಥಳದಲ್ಲಿಯೇ ಗ್ರಾಹಕರ ಸಮಸ್ಯೆಗಳಿಗೆ ಪರಿಹಾರ ನೀಡಲು ಕ್ರಮ ವಹಿಸಲು ಸರ್ಕಾರವು ಆದೇಶಿಸಿರುವ ಪ್ರಯುಕ್ತ ನ.18ರಂದು ಬೆಳಿಗ್ಗೆ 11 ಗಂಟೆಗೆ ವಿದ್ಯುತ್ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಕಾರಣ, ಸಾರ್ವಜನಿಕರು ಸದರಿ ಪ್ರಕಟನೆಯನ್ನು ಗಮನಿಸಿ ತಮ್ಮ ವಿದ್ಯುತ್ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಹೆಸ್ಕಾಂ ಕಾರ್ಯ ಮತ್ತು ಪಾಲನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ದಾಸಶ್ರೇಷ್ಠ ಕನಕದಾಸರ ಜಯಂತಿ ಪ್ರಯುಕ್ತ ಪೂರ್ವಭಾವಿ ಸಭೆ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನವೆಂಬರ್ 30 ರಂದು ದಾಸಶ್ರೇಷ್ಠ ಕನಕದಾಸರ ಜಯಂತಿಯನ್ನು ಆಚರಿಸಲಾಗುತ್ತಿದ್ದು, ಅದರ ಪ್ರಯುಕ್ತ ನವೆಂಬರ್ 18 ರಂದು ಮಧ್ಯಾಹ್ನ 3 ಗಂಟೆಗೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಹಮ್ಮಿಕೊಳ್ಳಲಾಗಿದೆ.

ಸಮಾಜದ ಮುಖಂಡರು ಸಭೆಗೆ ಹಾಜರಾಗಿ ತಮ್ಮ ಸಲಹೆ / ಅಭಿಪ್ರಾಯಗಳನ್ನು ತಿಳಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 70ನೇ 'ಅಖಿಲ ಭಾರತ ಸಹಕಾರ ಸಪ್ತಾಹ' ಕಾರ್ಯಕ್ರಮದಲ್ಲಿ ಸಚಿವ ಸಂತೋಷ್ ಲಾಡ್

# ಸಹಕಾರಿ ಸಂಸ್ಥೆಗಳು ಅಭಿವೃದ್ಧಿಯ ಅವಿಭಾಜ್ಯ ಅಂಗ



> ಸಹಕಾರ ಸಂಘಕ್ಕೆ ಅವಿಭಜಿತ ಧಾರವಾಡ ಜಿಲ್ಲೆಯ ಸಹಕಾರಿ ರಂಗದ ಪಿತಾಮಹ ಸಿದ್ದನಗೌಡ ರಾಮನಗೌಡರ ಕೊಡುಗೆ ಅಪಾರವಾಗಿದೆ. ದೇಶದಲ್ಲಿ 9 ಲಕ್ಷ ಸಹಕಾರ ಸಂಸ್ಥೆಗಳಿವೆ. ಸಹಕಾರ ಸಂಸ್ಥೆಗಳು ಬಡತನವನ್ನು ನಿವಾರಿಸಲು, ಉದ್ಯೋಗವನ್ನು ಸೃಷ್ಟಿಸಲು ಮತ್ತು ಸಮಾನ ಆರ್ಥಿಕ ಬೆಳವಣಿಗೆಯನ್ನು ಉತ್ತೇಜಿಸುವಲ್ಲಿ ಪ್ರಮುಖ ಪಾತ್ರ ವಹಿಸಿವೆ. ಸಹಕಾರಿ ಸಂಘಗಳಿಂದ ಶಿಕ್ಷಣದ ಗುಣಮಟ್ಟವನ್ನು ಸುಧಾರಿಸಿ, ಉದ್ಯೋಗವನ್ನು ಹೆಚ್ಚಿಸಲು ಸಹಕಾರಿಯಾಗಿದೆ. ಸರ್ಕಾರ ಜಾರಿ ಮಾಡುತ್ತಿರುವ ಐದು ಜನಪರ ಯೋಜನೆಗಳಿಗೆ ಅಂದಾಜು 56 ಸಾವಿರ ಕೋಟಿ ರೂ. ಅನುದಾನ ಬಳಕೆ ಮಾಡಲಾಗುತ್ತಿದೆ.
>
> – **ಸಂತೋಷ್ ಲಾಡ್.**
> ಕಾರ್ಮಿಕ ಇಲಾಖೆ, ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರು.

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಹಕಾರಿ ಸಂಸ್ಥೆಗಳು ದಶಕಗಳಿಂದ ಭಾರತದ ಸಾಮಾಜಿಕ ಮತ್ತು ಆರ್ಥಿಕ ರಚನೆಯ ಅವಿಭಾಜ್ಯ ಅಂಗವಾಗಿವೆ. ಭಾರತದ ಸಹಕಾರಿ ವ್ಯವಸ್ಥೆ ಇಡೀ ವಿಶ್ವದಲ್ಲಿಯೇ ದೊಡ್ಡದಾಗಿದೆ ಮತ್ತು ಕೃಷಿ ಸಂಬಂಧಿತ ವಲಯದ ಪ್ರಬಲ ಆಧಾರಸ್ತಂಭವಾಗಿದೆ ಎಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಕಲಘಟಗಿ ಪಟ್ಟಣದ ಹನ್ನೆರಡೆತ್ತಿನ ಮಠದ ಹತ್ತಿರದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಕರ್ನಾಟಕ ಸೌಹಾರ್ದ ಸಂಯುಕ್ತ ಸಹಕಾರಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ, ಕರ್ನಾಟಕ ರಾಜ್ಯ ತೋಟಗಾರಿಕಾ ಮಹಾಮಂಡಳ ಹಾಗೂ ಕರ್ನಾಟಕ ಸೆಂಟ್ರಲ್ ಕೋ-ಆಪ್ ಬ್ಯಾಂಕ್, ಧಾರವಾಡ ಮತ್ತು ವಿವಿಧ ಸಹಕಾರ ಸಂಘ, ಹಾಲು ಒಕ್ಕೂಟಗಳ ಆಶ್ರಯದಲ್ಲಿ ಆಯೋಜಿಸಿದ್ದ 70ನೇ ಅಖಿಲ ಭಾರತ ಸಹಕಾರ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಗಮದ ಉಪಾಧ್ಯಕ್ಷ ಜಗದೀಶ ಕವಟಗಿಮಠ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ಉಪಾಧ್ಯಕ್ಷ ಕೆ.ಕೆ. ಮಹೇಂದ್ರ ಪ್ರಸಾದಗೌಡ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡದ ವೃತ್ತಿಪರ ನಿರ್ದೇಶಕ ಬಾಪುಗೌಡ ಡಿ.ಪಾಟೀಲ, ಕರ್ನಾಟಕ ರಾಜ್ಯ ಅಪೆಕ್ಸ್ ಬ್ಯಾಂಕ್ ನಿರ್ದೇಶಕ ಲಿಂಗರಾಜ್ ಚಪ್ಪರದಳ್ಳಿ, ಕರ್ನಾಟಕ ರಾಜ್ಯ ಗ್ರಾಹಕ ಸಹಕಾರ ಮಹಾಮಂಡಳದ ಅಧ್ಯಕ್ಷ ಜಿ.ಪಿ. ಪಾಟೀಲ್, ಕರ್ನಾಟಕ ರಾಜ್ಯ ಸಹಕಾರ ತೋಟಗಾರಿಕಾ ಮಹಾಮಂಡಳದ ಅಧ್ಯಕ್ಷ ಡಾ. ಬಿ.ಡಿ. ಭೂಕಾಂತ, ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳ ಉಪಾಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ್, ಧಾರವಾಡ ಜಿಲ್ಲಾ ಸೌಹಾರ್ದ ಸಹಕಾರ ಒಕ್ಕೂಟದ ಅಧ್ಯಕ್ಷ ಮಲ್ಲಿಕಾರ್ಜುನ ಹೊರಕೇರಿ, ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳ ನಿಗಮದ ನಿರ್ದೇಶಕ ಡಾ. ಸಂಜಯ ಪಂ. ಹೊಸಮಠ, ಧಾರವಾಡ, ಗದಗ ಮತ್ತು ಉತ್ತರ ಕನ್ನಡ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ಅಧ್ಯಕ್ಷ ಶಂಕರ ವ್ಹಿ. ಮುಗದ ಸೇರಿದಂತೆ ವಿವಿಧ ಜನಪ್ರತಿನಿಧಿಗಳು, ಸಹಕಾರ ಇಲಾಖೆಯ ಅಧಿಕಾರಿಗಳು ವೇದಿಕೆಯಲ್ಲಿದ್ದರು. ಧಾರವಾಡ ಕೆ.ಸಿ.ಸಿ. ಬ್ಯಾಂಕ್ ನಿರ್ದೇಶಕ ಮಂಜುನಾಥಗೌಡ ಮುರಳ್ಳಿ ಸ್ವಾಗತಿಸಿದರು. ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ಅಧ್ಯಕ್ಷ ಜಿ. ನಂಜನಗೌಡ ಪ್ರಾಸ್ತವಿಕವಾಗಿ ಮಾತನಾಡಿದರು. ಗೌರಿ ಮಟ್ಟಿ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಶ್ರೇಷ್ಠ ಸಹಕಾರಿಗಳಿಗೆ ಸನ್ಮಾನಿಸಿ, ಗೌರವಿಸಲಾಯಿತು. ಸಹಕಾರ ವಿಶೇಷ ವಾರಪತ್ರಿಕೆಯನ್ನು ಬಿಡುಗಡೆ ಮಾಡಲಾಯಿತು. ಕಾರ್ಯಕ್ರಮದಲ್ಲಿ ವಿವಿಧ ಸಹಕಾರಿ ಕ್ಷೇತ್ರಗಳ ಪ್ರತಿನಿಧಿಗಳು, ನಿರ್ದೇಶಕರು, ಸದಸ್ಯರು ಭಾಗವಹಿಸಿದ್ದರು.

## ವಿಶ್ವ ವಿಕಲಚೇತನರ ದಿನಾಚರಣೆ: ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ವಿಕಲಚೇತನರ ದಿನಾಚರಣೆಯನ್ನು ಡಿಸೆಂಬರ್ 3 ರಂದು ಬೆಳಿಗ್ಗೆ 10.30 ಗಂಟೆಗೆ ಗದಗ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರದಂದು ವಿಶ್ವ ವಿಕಲಚೇತನರ ದಿನಾಚರಣೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿಶ್ವ ವಿಕಲಚೇತನರ ದಿನಾಚರಣೆ ನಿಮಿತ್ತ ಹಮ್ಮಿಕೊಳ್ಳಲಾಗುವ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಅಚ್ಚುಕಟ್ಟಾಗಿ ಏರ್ಪಡಿಸಬೇಕೆಂದು ನಿರ್ದೇಶನ ನೀಡಿದರು.

ಜಿಲ್ಲಾ ಅಂಗವಿಕರ ಕಲ್ಯಾಣಾಧಿಕಾರಿ ಕೆ.ಮಹಾಂತೇಶ ಮಾತನಾಡಿ, ವಿಶ್ವ ವಿಕಲಚೇತನರ ದಿನಾಚರಣೆ ಪ್ರಯುಕ್ತ ನವೆಂಬರ್ 21 ರಂದು ಬೆ 9 ಗಂಟೆಗೆ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗುವುದು. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ( ರಾಜ್ಯ , ಅಂತರಾಜ್ಯ, ರಾಷ್ಟ್ರೀಯ ಮಟ್ಟದಲ್ಲಿ) ವಿಕಲಚೇತನ ವ್ಯಕ್ತಿಗಳಿಗೆ ದಿನಾಚರಣೆ ಸಂದರ್ಭದಲ್ಲಿ ಸನ್ಮಾನಿಸಲಾಗುತ್ತಿದ್ದು, ಸಾಧನೆಗೈದ ವಿಕಲಚೇತನರು ನವೆಂಬರ್ 24 ರೊಳಗೆ ಪ್ರಸ್ತಾವನೆ ಸಲ್ಲಿಸಬೇಕೆಂದು ತಿಳಿಸಿದರು.



ಸಭೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಪರಶುರಾಮ ವಾಯ್ ಶೆಟ್ಟೆಪ್ಪಣವರ,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ವಿಕಲಚೇತನ ಸರ್ಕಾರಿ ನೌಕರರ ಸಂಘ ಅಧ್ಯಕ್ಷರು, ಜಿಲ್ಲೆಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಮುಖ್ಯಸ್ಥರು, ಜಿಲ್ಲೆಯ ಎಲ್ಲಾ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರು, ವಿವಿಧ ವಿಕಲಚೇತನರು ಹಾಗೂ ಇಲಾಖೆಯ ಸಿಬ್ಬಂಧಿಗಳು ಹಾಜರಿದ್ದರು.

## ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು ಮತ್ತು ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ ಸಂಸ್ಥೆಗಳಲ್ಲಿ ಖಾಲಿ ಇರುವ ಇತರೆ ಹುದ್ದೆಗಳಿಗೆ ನೇಮಕಾತಿ ಸಂಬಂಧ ನವೆಂಬರ್ 19 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ (ಪತ್ರಿಕೆ -1) ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 4.30 ಗಂಟೆಯವರೆಗೆ ( ಪತ್ರಿಕೆ-2) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸುತ್ತಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 16 ಪರೀಕ್ಷಾ ಕೇಂದ್ರದ ಸುತ್ತಲೂ ನವೆಂಬರ್ 19 ರಂದು ಬೆ. 9 ಗಂಟೆಯಿಂದ ಸಂಜೆ 5.30 ಗಂಟೆಯವರೆಗೆ 200 ಮೀಟರ್ ಪ್ರದೇಶವನ್ನು ನಿಷೇದಿತ ಪ್ರದೇಶವನ್ನಾಗಿ ಘೋಷಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಪ್ರದೇಶ ▶▶ 3ನೇ ಪುಟಕ್ಕೆ

## 'ಸಹಕಾರ ರತ್ನ ಪ್ರಶಸ್ತಿ'ಗೆ ಗುರಣ್ಣ ಬಳಗಾನೂರ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸಹಕಾರ ಚಳುವಳಿಯ ಬೆಳವಣಿಗೆಗೆ ಸಲ್ಲಿಸಿದ ಅನುಪಮ ಸೇವೆಯನ್ನು ಗುರುತಿಸಿ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ನಿಯಮಿತವು ನೀಡುವ 2023ನೇ ಸಾಲಿನ 'ಸಹಕಾರ ರತ್ನ ಪ್ರಶಸ್ತಿ'ಗೆ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ ಅವರನ್ನು ಆಯ್ಕೆ ಮಾಡಿದೆ.



70ನೇ ಅಖಿಲ ಭಾರತ ಸಹಕಾರ ಸಪ್ತಾಹದ ಸಮಾರೋಪ ಸಮಾರಂಭವು ನ.20ರಂದು ಬೆಳಿಗ್ಗೆ 9 ಗಂಟೆಗೆ ವಿಜಯಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಆವರಣ (ಕಿತ್ತೂರು ಚನ್ನಮ್ಮ ನಗರ, ಸೋಲಾಪುರ ರಸ್ತೆ)ದಲ್ಲಿ ಜರುಗಲಿದೆ. ಈ ಸಮಾರಂಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗುರಣ್ಣ ಬಳಗಾನೂರ ಅವರಿಗೆ 'ಸಹಕಾರ ರತ್ನ' ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

'ಸಹಕಾರ ರತ್ನ ಪ್ರಶಸ್ತಿ'ಗೆ ಭಾಜನರಾದ ಗುರಣ್ಣ ಬಳಗಾನೂರರನ್ನು ರಾಜ್ಯದ ಕಾನೂನು, ಸಂಸದೀಯ ವ್ಯವಹಾರಗಳ ಇಲಾಖೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಸೇರಿದಂತೆ ಅನೇಕರು ಅಭಿನಂದಿಸಿದ್ದಾರೆ.

## ಸ್ಪರ್ಧಾತ್ಮಕ ಪರೀಕ್ಷೆಗಳ ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರ, ಮಾರ್ಗಾಧಿಕಾರಿಗಳ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, ಬೆಂಗಳೂರು, ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, ಬೆಂಗಳೂರು ಮತ್ತು ಮೈಸೂರು ಸೇಲ್ಸ್ ಇಂಟರ್ ನ್ಯಾಷನಲ್ ಲಿಮಿಟೆಡ್ ಸಂಸ್ಥೆಗಳಲ್ಲಿ ಖಾಲಿ ಇರುವ ಇತರೆ ಹುದ್ದೆಗಳಿಗೆ ನೇಮಕಾತಿ ಸಂಬಂಧ ನವೆಂಬರ್ 19 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.30 ರವರೆಗೆ (ಪತ್ರಿಕೆ-1) ಹಾಗೂ ಮಧ್ಯಾಹ್ನ 2.30 ರಿಂದ ಸಂಜೆ 4.30 ಗಂಟೆಯವರೆಗೆ ( ಪತ್ರಿಕೆ-2) ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಜಿಲ್ಲೆಯ 16 ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುತ್ತಿದೆ. ಪರೀಕ್ಷೆಗಳು ಸುಗಮವಾಗಿ ಜರುಗುವ ಮತ್ತು ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳಿಗೆ ವೀಕ್ಷಕರು, ಮಾರ್ಗಾಧಿಕಾರಿಗಳು ಮತ್ತು ತ್ರಿಸದಸ್ಯ ಸಮಿತಿಯನ್ನು ನೇಮಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಾಧಕ ವಿದ್ಯಾರ್ಥಿಗಳ ಸನ್ಮಾನ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ

## ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧರಾಗಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರತಿಯೊಬ್ಬ ವ್ಯಕ್ತಿಗೂ ದೇವರು ಸಾಮರ್ಥ್ಯ ಮತ್ತು ಅದಮ್ಯ ಶಕ್ತಿಯನ್ನು ಕೊಟ್ಟಿರುತ್ತಾನೆ. ಕೀಳರಿಮೆಯಿಂದ ಹೊರಬಂದು ಕೇಂದ್ರ ಸರ್ಕಾರದ ಪರೀಕ್ಷೆಗಳಾದ ಐಎಎಸ್, ಐಎಫ್ಎಸ್ ಹಾಗೂ ಐಪಿಎಸ್ ಪರೀಕ್ಷೆಗಳನ್ನು ಎದುರಿಸಿ ಯಶಸ್ವಿಯಾಗಬೇಕೆಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಕರೆ ನೀಡಿದರು.

ಅವರು ಗದಗ ಪ್ರವಾಸಿ ಮಂದಿರದಲ್ಲಿ ಕರ್ನಾಟಕ ರಾಜ್ಯ ಪದವಿಪೂರ್ವ ಮಹಾವಿದ್ಯಾಲಯ ನೌಕರರ ಸಂಘ, ಗದಗ ಜಿಲ್ಲಾ ಪದವಿಪೂರ್ವ ಕಾಲೇಜುಗಳ ಪ್ರಾಚಾರ್ಯರ ಸಂಘ, ಕರ್ನಾಟಕ ರಾಜ್ಯ ಪದವಿಪೂರ್ವ ಕಾಲೇಜುಗಳ ಉಪನ್ಯಾಸಕರುಗಳ ಸಂಘಗಳ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಎಂ.ಕಾಂ ಪರೀಕ್ಷೆಯಲ್ಲಿ ವಿಶ್ವವಿದ್ಯಾಲಯಕ್ಕೆ ಪ್ರಥಮ ರ್‍ಯಾಂಕ್‌ನೊಂದಿಗೆ ಐದು ಚಿನ್ನದ ಪದಕ ಪಡೆದ ಗದಗ-ಬೆಟಗೇರಿ ನಗರದ ಸಿತಾರಾ ರಾಯಬಾಗಿ ಹಾಗೂ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಎಂ.ಕಾಂ ಪರೀಕ್ಷೆಯಲ್ಲಿ ಸಾಧನೆಗೈದ ಪೂಜಾ ಕಣವಿ ಅವರಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಮಾತನಾಡಿದರು.



ಟೇಲರಿಂಗ್ ವೃತ್ತಿ ಮಾಡುತ್ತಿರುವ ರಾಯಬಾಗಿ ಅವರ ಮಗಳಾದ ಸಿತಾರಾ ರಾಯಬಾಗಿ, ಕಟ್ಟಡ ಕಾರ್ಮಿಕರ ಮಗಳಾದ ಪೂಜಾ ಕಣವಿ ಅವರು ಬಡ ಕುಟುಂಬದಲ್ಲಿ ಜನಿಸಿದ್ದರೂ ದೊಡ್ಡ ಸಾಧನೆ ಮಾಡಿದ್ದನ್ನು ▶▶ 3ನೇ ಪುಟಕ್ಕೆ

